## ಕರ್ನಾಟಕ ಸರ್ಕಾರ

ಸಂಖ್ಯೆ:ಸಿಆಸುಇ:4:ರಾರಾಅ:2017

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ,
ಬೆಂಗಳೂರು, ದಿನಾಂಕ:24-01-2017.

ಕಾಲೇಜು ಶಿಕ್ಷಣ ಆಯುಕ್ತರ ... ಶಾಖೆ ... 25/01/2017 ದಿನಾಂಕ ...

## ಸುತ್ತೋಲೆ

ವಿಷಯ:-ಜನವರಿ 25, 2017ರಂದು "ರಾಷ್ಟ್ರೀಯ ಮತದಾರರ ದಿನ" ವನ್ನು ಆಚರಿಸುವ ಬಗ್ಗೆ.

ಉಲ್ಲೇಖ:-ಭಾರತದ ಮುಖ್ಯ ಚುನಾವಣಾಧಿಕಾರಿಗಳು, ಮುಖ್ಯ ಕಾರ್ಯದರ್ಶಿಗಳಿಗೆ ಬರೆದ ಅರೆ ಸರ್ಕಾರಿ ಪತ್ರ ಸಂಖ್ಯೆ: 491/ECI/LET/FUNC/SVEEP-II/NVD/2016 ದಿ:27-12-2016.

--------

ಮುಖ್ಯ ಚುನಾವಣಾಧಿಕಾರಿ, ಭಾರತ ಚುನಾವಣಾ ಆಯೋಗ, ಇವರು ಉಲ್ಲೇಖದಲ್ಲಿನ ಪತ್ರದಲ್ಲಿ ದಿನಾಂಕ:25-01-2017ರಂದು **"ರಾಷ್ಟ್ರೀಯ ಮತದಾರರ ದಿನ"**ವನ್ನಾಗಿ ಆಚರಿಸುವಂತೆ ರಾಜ್ಯ ಸರ್ಕಾರವನ್ನು ಕೋರಿರುತ್ತಾರೆ. ನಮ್ಮ ದೇಶದ ಪ್ರಜಾಸತ್ತಾತ್ಮಕ ಸಂಪ್ರದಾಯಗಳನ್ನು ಹಾಗೂ ನ್ಯಾಯಸಮ್ಮತ ಚುನಾವಣೆಗಳ ಘನತೆಯನ್ನು ಎತ್ತಿಹಿಡಿಯುವ ಸಲುವಾಗಿ ರಾಷ್ಟ್ರೀಯ ಮತದಾರರ ದಿನವನ್ನು ಆಚರಿಸುವ ಅಗತ್ಯವಿದೆಯೆಂದು ಉಲ್ಲೇಖದಲ್ಲಿನ ಪತ್ರದಲ್ಲಿ ತಿಳಿಸಲಾಗಿದೆ. ದಿನಾಂಕ:25-01-2017 ಭಾರತದ ಚುನಾವಣಾ ಆಯೋಗದ ಸಂಸ್ಥಾಪನಾ ದಿನವಾಗಿರುತ್ತದೆ. ಲಕ್ಷಾಂತರ ಯುವ ಜನತೆ ಪ್ರತಿ ಜನವರಿಯಲ್ಲಿ ದೇಶದಾದ್ಯಂತ ಜರುಗುವ ಮತದಾರರ ಪಟ್ಟಿಯ ಪರಿಷ್ಕರಣೆಯಲ್ಲಿ ಮತದಾರರು ನೋಂದಾವಣೆಗೊಳ್ಳುತ್ತಾರೆ. ಪ್ರಜಾಪ್ರಭುತ್ವವನ್ನು ಬಲಪಡಿಸಲು ಯುವಜನತೆ ಚುನಾವಣಾ ಪ್ರಕ್ರಿಯೆಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬೇಕು. ಆದುದರಿಂದ ಜನವರಿ 25ನ್ನು ದೇಶಾದ್ಯಂತ ರಾಷ್ಟ್ರೀಯ ಮತದಾರರ ದಿನವನ್ನಾಗಿ ಆಚರಿಸಲಾಗುತ್ತಿದೆ. ಈ ಸಂದರ್ಭದಲ್ಲಿ ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ **"ಪ್ರತಿಜ್ಞಾ ವಿಧಿ"**ಯನ್ನು ಬೋಧಿಸುವಂತೆ ಭಾರತ ಚುನಾವಣಾ ಆಯೋಗವು ಸೂಚಿಸಿರುತ್ತದೆ. ಪ್ರತಿಜ್ಞಾ ವಿಧಿ ಈ ಕೆಳಕಂಡಂತೆ ಇರುತ್ತದೆ.

> "ಪ್ರಜಾಪ್ರಭುತ್ವದಲ್ಲಿ ದೃಢವಿಶ್ವಾಸವುಳ್ಳ ಭಾರತದ ಪೌರರಾದ ನಾವು, ನಮ್ಮ ದೇಶದ ಪ್ರಜಾಸತ್ತಾತ್ಮಕ ಸಂಪ್ರದಾಯಗಳು ಮತ್ತು ಮುಕ್ತ, ನ್ಯಾಯಸಮ್ಮತ ಮತ್ತು ಶಾಂತಿಯುತ ಚುನಾವಣೆಗಳ ಘನತೆಯನ್ನು ಎತ್ತಿಹಿಡಿಯುತ್ತೇವೆಂದು ಮತ್ತು ಪ್ರತಿಯೊಂದು ಚುನಾವಣೆಯಲ್ಲಿ ನಿರ್ಭೀತರಾಗಿ ಮತ್ತು ಧರ್ಮ, ಜನಾಂಗ, ಜಾತಿ, ಮತ, ಭಾಷೆ ಅಥವಾ ಯಾವುದೇ ಪ್ರೇರೇಪಣೆಗಳ ದಾಕ್ಷಿಣ್ಯಗಳಿಂದ ಪ್ರಭಾವಿತರಾಗದೆ ಮತ ಚಲಾಯಿಸುತ್ತೇವೆಂದು ಈ ಮೂಲಕ ಪ್ರತಿಜ್ಞೆ ಸ್ವೀಕರಿಸುತ್ತೇವೆ".

ಈ ಹಿನ್ನೆಲೆಯಲ್ಲಿ ದಿನಾಂಕ:25-01-2017ರಂದು ರಾಜ್ಯದ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ **"ಮತದಾರರ ಪ್ರತಿಜ್ಞಾ ವಿಧಿ"**ಯನ್ನು ಬೋಧಿಸುವ ಅಗತ್ಯವಿರುತ್ತದೆ. ಸಚಿವಾಲಯ ಮಟ್ಟದಲ್ಲಿ ಆಯಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು ದಿನಾಂಕ:25-01-2017ರಂದು ತಮ್ಮ ಇಲಾಖೆಯ ಅಧಿಕಾರಿ ಸಿಬ್ಬಂದಿಗಳಿಗೆ ಬೆಳಗ್ಗೆ 11.00ಗಂಟೆಗೆ ಪ್ರತಿಜ್ಞಾ ವಿಧಿಯನ್ನು ಬೋಧಿಸುವಂತೆ ಕೋರಲಾಗಿದೆ. ಇಲಾಖಾ ಮುಖ್ಯಸ್ಥರು ಮತ್ತು ಅಧೀನ ಕಛೇರಿಗಳಲ್ಲಿಯೂ ಸಹ **ದಿನಾಂಕ:25-01-2017ರ ಬೆಳಗ್ಗೆ 11.00 ಗಂಟೆಗೆ "ಪ್ರತಿಜ್ಞಾ ವಿಧಿ"** ಬೋಧಿಸುವ ಕಾರ್ಯಕ್ರಮವನ್ನು ಕಡ್ಡಾಯವಾಗಿ ನಡೆಸುವಂತೆ ಸೂಚಿಸಿದೆ.

ಮೇಲ್ಕಾಣಿಸಿದ ಸೂಚನೆಗಳನ್ನು ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು ತಪ್ಪದೇ ಪಾಲಿಸುವಂತೆ ಈ ಮೂಲಕ ಸೂಚಿಸಲಾಗಿದೆ.

**(ಟಿ.ಕೆ. ಅನಿಲ್ ಕುಮಾರ್)**
ಸರ್ಕಾರದ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.

**ಇವರಿಗೆ:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು.
2. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
3. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ, ವಿಧಾನಸೌಧ, ಬೆಂಗಳೂರು.
4. ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
5. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು
6. ಎಲ್ಲಾ ಜಿಲ್ಲಾಧಿಕಾರಿಗಳು,
7. ಎಲ್ಲಾ ಇಲಾಖಾ ಮುಖ್ಯಸ್ಥರುಗಳು,
8. ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
9. ಮಾನ್ಯ ಮುಖ್ಯಮಂತ್ರಿಗಳ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ
10. ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಯವರು. ವಿಧಾನಸೌಧ.

डा० नसीम जैदी
भारत के मुख्य निर्वाचन आयुक्त
**DR. NASIM ZAIDI**
Chief Election Commissioner of India

भारत निर्वाचन आयोग
**Election Commission of Ind**

D.O. No. 491/ECI/LET/FUNC/SVEEP-II/NVD/2016

**27 December, 2016**

*Dear* Shri Kuntia

You may be aware that the National Voters' Day is being celebrated across the country on 25th January to register the newly eligible young (18+) in the electoral roll and also to promote electoral participation.

2. In keeping with the practice in the past five years, it is requested that schools and Educational Institutions in your state may be instructed to organize National Voters' Day for infusion of democratic values like debate, declamations, mock polls, drawing and quiz competitions on or during run-up to National Voters' Day with the theme of democracy and electoral participations. The CEO of your State shall facilitate technical inputs for the same.

3. I would also like to request you to direct that all staff & officers in Government Department and officers in your State take the NVD pledge (attachment herewith) on the National Voters' Day (25th January, 2017) preferably around 11: 00 AM to promote democratic electoral participation. I have already written to Cabinet Secretary in respect of Central Government offices.

*With Best wishes,*

Yours Sincerely,

(Dr.Nasim Zaidi)

**Shri Subhash Chandra Kuntia,**
**Chief Secretary,**
**Karnataka,**
**Bangaluru**

Encl: NVD pledge (Hindi/English)
Copy to: Chief Electoral Officer, Karnataka.

01
02 JAN 2017



# Voters' Pledge

"We, the citizens of India, having abiding faith in democracy, hereby pledge to uphold the democratic traditions of our country and the dignity of free, fair and peaceful elections, and to vote in every election fearlessly and without being influenced by considerations of religion, race, caste, community, language or any inducement".

P.T.O

# मतदाताओं द्वारा ली जाने वाली शपथ

"हम, भारत के नागरिक, लोकतंत्र में अपनी पूर्ण आस्था रखते हुए यह शपथ लेते हैं कि हम अपने देश की लोकतांत्रिक परम्पराओं की मर्यादा को बनाए रखेंगे तथा स्वतंत्र, निष्पक्ष एवं शांतिपूर्ण निर्वाचन की गरिमा को अक्षुण्ण रखते हुए, निर्भीक होकर, धर्म, वर्ग, जाति, समुदाय, भाषा अथवा अन्य किसी भी प्रलोभन से प्रभावित हुए बिना सभी निर्वाचनों में अपने मताधिकार का प्रयोग करेंगे"।

कृपया पृष्ठ पलटें

# "ರಾಷ್ಟ್ರೀಯ ಮತದಾರರ ದಿನದ ಪ್ರತಿಜ್ಞೆ"

ಪ್ರಜಾಪ್ರಭುತ್ವದಲ್ಲಿ ದೃಢವಿಶ್ವಾಸವುಳ್ಳ ಭಾರತದ ಪೌರರಾದ ನಾವು, ನಮ್ಮ ದೇಶದ ಪ್ರಜಾಸತ್ತಾತ್ಮಕ ಸಂಪ್ರದಾಯಗಳು ಮತ್ತು ಮುಕ್ತ, ನ್ಯಾಯಸಮ್ಮತ ಮತ್ತು ಶಾಂತಿಯುತ ಚುನಾವಣೆಗಳ ಘನತೆಯನ್ನು ಎತ್ತಿ ಹಿಡಿಯುತ್ತೇವೆಂದು ಮತ್ತು ಪ್ರತಿಯೊಂದು ಚುನಾವಣೆಯಲ್ಲಿ ನಿರ್ಭೀತರಾಗಿ ಮತ್ತು ಧರ್ಮ, ಜನಾಂಗ, ಜಾತಿ, ಮತ, ಭಾಷೆ ಅಥವಾ ಯಾವುದೇ ಪ್ರೇರೇಪಣೆಗಳ ದಾಕ್ಷಿಣ್ಯಗಳಿಂದ ಪ್ರಭಾವಿತರಾಗದೆ ಮತ ಚಲಾಯಿಸುತ್ತೇವೆಂದು ಈ ಮೂಲಕ ಪ್ರತಿಜ್ಞೆ ಸ್ವೀಕರಿಸುತ್ತೇವೆ.